**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ತಿ.ನರಸೀಪುರ.**

**ಓ.ಎಸ್. ನಂಃ55/2023 ಪಿ.ಡಬ್ಲೂಃ 01**

ಸಾಕ್ಷಿಯನ್ನು ಇಂದು ದಿನಾಂಕಃ **18.11.2023** ರಂದು ಕರೆಸಿ ಪ್ರಮಾಣ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿ ಪರ ಶ್ರೀ. **ಪಿ.ಎಸ್** ವಕೀಲರಿಂದಃ

ನಾನು ಈ ದಾವೆಯಲ್ಲಿ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ನನಗೆ ತಿಳಿದಿದ್ದು, ಪ್ರಮಾಣ ಪತ್ರವನ್ನು ನನ್ನ ಸೂಚನೆಯ ಮೇರೆಗೆ ತಯಾರಿಸಲಾಗಿದೆ. ಅದಕ್ಕೆ ನಾನು ರುಜು ಮಾಡಿರುತ್ತೇನೆ.

ನಾನು ದಿನಾಂಕ **16.03.2020** ರ ವಚನ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ನಿಪಿ-1 ರಲ್ಲಿರುವ ಪ್ರತಿವಾದಿಯ ಸಹಿಯನ್ನು ನಿಪಿ-1 ಎ ಎಂದು, ಸಾಕ್ಷಿ ಹುಚ್ಚೇಗೌಡ ಮತ್ತು ಬಿಕ್ಲಂ ಚಂದ್ರಮೋಹನರವರ ಸಹಿಗಳನ್ನು ನಿಪಿ-1 ಬಿ ಮತ್ತು ನಿಪಿ-1 ಸಿ ಎಂದು ಗುರುತಿಸಲಾಯಿತು.

ದಿನಾಂಕ **16.03.2020** ರ ಹಣ ಸಂದಾಯ ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ನಿಪಿ-2 ರಲ್ಲಿರುವ ಪ್ರತಿವಾದಿಯ ಸಹಿಯನ್ನು ನಿಪಿ-2 ಎ ಎಂದು, ಸಾಕ್ಷಿ ಹುಚ್ಚೇಗೌಡ ಮತ್ತು ಬಿಕ್ಲಂ ಚಂದ್ರಮೋಹನರವರ ಸಹಿಗಳನ್ನು ನಿಪಿ-2 ಬಿ ಮತ್ತು ನಿಪಿ-2 ಸಿ ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಸಮಯ ಕೋರಿದ್ದು, ಸಕಾರಣಗಳು ಇಲ್ಲದ ಕಾರಣ ಪಾಟೀ ಸವಾಲಿಗೆ ಮುಂದೂಡಲಾಯಿತು.

ನನ್ನ ಹೇಳಿಕೆಯ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.

ಓ ಹೇ ಕೆ ಸರಿ ಇದೆ.

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,**

**ನ್ಯಾಯಾಲಯ ತಿ.ನರಸೀಪುರ.**